ಸಿಂದಗಿ	15	11	4.062	5.079	35	25	3.25	6.656
ವಿಜಾಪುರ	10	8	5.499	5.104	30	15	7.775	7.25
ಬ.ಬಾಗೇವಾಡಿ	20	8	4.002	3.777	35	28	6.795	5.00
ಮುದ್ದೇಬಿಹಾಳ	78	83	18.561	10.208	35	20	12.00	9.258

1317 (1878) ಶ್ರೀ ಚನ್ನಬಸವರಾಜ್ (ಅಪ್ಪಾಜಿ) ಶಂಕರರಾವ್ ನಾಡಗೌಡ (ಮುದ್ದೇಬಿಹಾಳ್) :– ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಿಜಾಪುರ ಜಿಲ್ಲಾ ವ್ಯಾಪ್ತಿಯಲ್ಲಿನ ಅಂತರ್ಜಲ ಮಟ್ಟದ ಸುಧಾರಣೆಗಾಗಿ ಸರ್ಕಾರದ ಯೋಜನೆಗಳೇನು (ತಾಲ್ಲೂಕುವಾರು ವಿವರ ನೀಡುವುದು);

ಆ) ಈ ಜಿಲ್ಲಾ ವ್ಯಾಪ್ತಿಯ ಬೋರ್‌ವೆಲ್‌ಗಳಲ್ಲಿ ಹಾಗೂ ತೆರೆದ ಬಾವಿಗಳಲ್ಲಿ ಅಂತರ್ಜಲ ಮಟ್ಟದ ಕುಸಿತದಿಂದಾಗಿ ನೀರು ಲಭ್ಯವಾಗದ ನೀರಾವರಿ ಹಾಗೂ ಕುಡಿಯುವ ನೀರಿಗಾಗಿ ಜನರು ತೀವ್ರ ಸಂಕಷ್ಟವನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಈ) ನೀರಿನ ಲಭ್ಯತೆಯ ಕೊರತೆಯಿಂದಾಗಿ ಬೆಳೆ ನಾಶವನ್ನು ಅನುಭವಿಸಿದ ರೈತರುಗಳಿಗೆ ಸರ್ಕಾರ ಪರಿಹಾರ ನೀಡಿದೆಯೇ'

ಉ) ನೀಡಿದ್ದಲ್ಲಿ ಅದರ ವಿವರಗಳೇನು?

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು) :

ಅ) ಅಂತರ್ಜಲ ಮರು ಪೂರೈಕೆಗೆ ವಿವಿಧ ರೀತಿಯ ರಚನೆಗಳನ್ನು ಅನುಷ್ಠಾನಗೊಳಿಸುವ ಇಲಾಖೆಗಳಾದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕೃಷಿ, ಅರಣ್ಯ, ಜಲಾನಯನ ಅಭಿವೃದ್ಧಿ ಮತ್ತು ಇನ್ನಿತರೆ ಸರ್ಕಾರ ಇಲಾಖೆಗಳು ವಾರ್ಷಿಕ ಕಾರ್ಯಕ್ರಮ ಹಮ್ಮಿಕೊಂಡಿರುತ್ತವೆ. ರಚನೆಗಳನ್ನು ನಿರ್ಮಿಸಲು ವೈಜ್ಞಾನಿಕ ರೀತಿಯಲ್ಲಿ ಇಲಾಖಾವತಿಯಿಂದ ತಾಂತ್ರಿಕ ಸಲಹೆಗಳನ್ನು ಕೋರಿಕೆ ಮೇರೆಗೆ ನೀಡಲಾಗುತ್ತಿದೆ.

ಆ) ಬಂದಿದೆ.

ಇ) ಬಿಜಾಪುರ ಜಿಲ್ಲೆಯ 18 ಗ್ರಾಮಗಳಲ್ಲಿ ಹಾಗೂ ಒಂದು ಪಟ್ಟಣ ಪ್ರದೇಶದಲ್ಲಿ ಕುಡಿಯುವ ನೀರಿಗಾಗಿ ಸಂಕಷ್ಟ ಎದುರಿಸುತ್ತಿರುವುದರಿಂದ ಟ್ಯಾಂಕರ್‌ಗಳ ಮೂಲಕ ಕುಡಿಯುವ ನೀರನ್ನು ಸರಬರಾಜು ಮಾಡಲು ಕ್ರಮ ಕೈಗೊಳ್ಳಲಾಗಿದೆ.

ಈ) ಇಲ್ಲ.

ಉ) ಉದ್ಭವಿಸುವುದಿಲ್ಲ.

1319 (2030) ಶ್ರೀ ಬಾಲರಾಜ್ ಎಸ್. (ಕೊಳ್ಳೇಗಾಲ) :– ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ವಾಸಿಸುವ ಕಾಲೋನಿಗಳಲ್ಲಿ ಮದ್ಯದ ಅಂಗಡಿ ತೆರೆಯಲು ಯಾವ ಮಾನದಂಡಗಳ ಮೇಲೆ ಅನುಮತಿ ನೀಡಲಾಗುವುದು;

ಆ) ಅಬಕಾರಿ ಕಾಯ್ದೆಗೆ ವಿರುದ್ಧವಾಗಿ ಬೆಂಗಳೂರಿನ ಫ್ರೇಜರ್ ಟೌನ್‌ನಲ್ಲಿ ಮದ್ಯದ ಅಂಗಡಿ ತೆರೆಯಲು ಸನ್ನದು ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದರೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು?

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು) :

ಅ) ಕರ್ನಾಟಕ ಅಬಕಾರಿ ಸನ್ನದುಗಳು (ಸಾಮಾನ್ಯ ಷರತ್ತುಗಳು) ನಿಯಮಗಳು 1967ರ ನಿಯಮ 5(1) ರನ್ವಯ ಉದ್ದೇಶಿತ ಸನ್ನದಿನ ಸ್ಥಳದಿಂದ 100 ಮೀಟರ್ ಅಂತರದಲ್ಲಿ ಪ್ರಧಾನವಾಗಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ವಾಸಿಸುವ ಕಾಲೋನಿಗಳಲ್ಲಿ ಮದ್ಯ ಮಾರಾಟ ಮಾಡಲು ಸನ್ನದು ಮಂಜೂರಾತಿಗೆ ಅವಕಾಶವಿರುವುದಿಲ್ಲ. ಆದರೆ, ಇದೇ ನಿಯಮದ ಉಪ ನಿಯಮ (2)ರ ಷರತ್ತುವಿನ ಪ್ರಕಾರ ಡೆಪ್ಯುಟಿ ಕಮೀಷನರ್ ಆಫ್ ಎಕ್ಸ್‌ಸ್‌ರವರು ಅಬಕಾರಿ ಆಯುಕ್ತರ